**02ನೇ ಹೆಚ್ಚುವರಿ  ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ,**

**ನ್ಯಾಯಾಧೀಶರವರ ನ್ಯಾಯಾಲಯ , ಚನ್ನಗಿರಿ .**

**ಸಿಸಿ ನಂ. 237/2018**

| | |
|---|---|
| ಹೆಸರುಃ  ಜಬೀವುಲ್ಲಾ | ಚಾಸಾಃ 5 |
| ತಂದೆಯ  ಹೆಸರುಃ   ಅಬ್ದುಲ್ ರೆಹಮಾನ್ | ಪ್ರಾಸಾ: 4 |
| ವಯಸ್ಸುಃ  35  ವರ್ಷ | |
| ಉದ್ಯೋಗಃ   ವ್ಯಾಪಾರ | |
| ವಾಸ ಸ್ಥಳಃ  ಚನ್ನಗಿರಿ | |
| ಸಾಕ್ಷಿಗೆ ದಿನಾಂಕಃ 23-01-2025 ರಂದು ಪ್ರಮಾಣ ವಚನ ಬೋಧಿಸಲಾಯಿತು. | |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ,  ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು ಸದರಿ ದಾಖಲೆ ಅಮಾನತು ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.  ಸದರಿ ಸಹಿಯನ್ನು  ಯಾವಾಗ, ಯಾವ ವಿಚಾರವಾಗಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ಅದರಲ್ಲಿ ಬರೆದ ವಿಚಾರ ನನಗೆ ಗೊತ್ತಿಲ್ಲ. ಪೊಲೀಸರ ಸೂಚನೆ ಮೇರೆಗೆ ಸದರಿ ದಾಖಲೆಗೆ  ಪೊಲೀಸ್ ಠಾಣೆಯಲ್ಲಿ  ಸಹಿ ಮಾಡಿರುತ್ತೇನೆ. ನನ್ನ ಜೊತೆ ನಿಪಿ-3 ಕ್ಕೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತುಪಡಿಸಿಕೊಂಡಿಲ್ಲ. ನನ್ನ ಸಮಕ್ಷಮ ಯಾವುದೇ ಫೋಟೋವನ್ನು ತೆಗೆದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಮಹಜರಿಗೆ  ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು**

**ಕೇಳಿಕೊಂಡಿದ್ದು, ಮಹಜರನ್ನು ನೋಡಲಾಗಿ ಸಾಕ್ಷಿಯು ಮಹಜರಿಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**<u>ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ</u>**

ದಿಃ28-03-2017ರಂದು ಚಾಸಾ-15 ರವರು ನನ್ನನ್ನು ಹಾಗೂ ಚಾಸಾ-4 ರವರ ಸಮಕ್ಷಮ ನಿಪಿ-1 ರಲ್ಲಿ ನಮೂದಿಸಿರುವ ವಾಹನಗಳನ್ನು ಮತ್ತು ಬಂಗಾರದ ಒಡವೆಗಳನ್ನು ಅಮಾನತು ಪಂಚನಾಮೆ ಜರುಗಿಸಲು ಪಂಚರಾಗಿ ಸಹಕರಿಸಲು ಕೋರಿದರು ಎಂದರೆ ಸರಿಯಲ್ಲ. ಸದರಿ ನಿಪಿ-1 ನ್ನು ಅದೇ ದಿನ ಮದಾಹ್ನ 3.00 ರವರೆಗೆ ಜರುಗಿಸಲಾಯಿತು ಎಂದರೆ ನನಗೆ ಗೊತ್ತಿಲ್ಲ. ನಿಪಿ-1ರ ಸಮಯಕ್ಕೆ ಎಸ್ ಎಸ್ ಜ್ಯೂಯಲರಿ ಶಾಪ್ ಮುಂದೆ ಚಾಸಾ-14 ರವರು ನನ್ನನ್ನು ಮತ್ತು ಚಾಸಾ-4ರವರನ್ನು ಒಳಗೊಂಡಂತೆ ಪೊಟೋವನ್ನು ತೆಗೆದಿರುತ್ತಾರೆ ಸದರಿ ಭಾವಚಿತ್ರವೇ ಈಗ ನೋಡುತ್ತಿರುವ ಪೋಟೋ ಎಂದರೆ ಸರಿ. ಸದರಿ ಪೊಟೋವನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-5 ಎಂದು ಗುರುತಿಸಲಾಯಿತು. ನಿಪಿ-5ರಲ್ಲಿ ಭಾವಚಿತ್ರಗಳು ಸ್ಪಷ್ಟವಾಗಿ ಕಾಣಿಸುತ್ತಿಲ್ಲ, ಹಾಗಾಗಿ ಸದರಿ ಪೊಟೋದಲ್ಲಿ ನಾನು ಇರುವ ಬಗ್ಗೆ ನನಗೆ ತಿಳಿಯುತ್ತಿಲ್ಲ. ಸರಿದ ದಿನ ಆರೋಪಿತರು ಮತ್ತು ಅವರ ಬಳಿಯಿದ್ದ ಬಂಗಾರದ ವಾಹನಗಳನ್ನು ಮತ್ತು ಮೋಟಾರ್ ಸೈಕಲ್ ಗಳನ್ನು ನಮ್ಮ ಸಮಕ್ಷಮ ಅಮಾನತುಪಡಿಸಿಕೊಂಡರು ಎಂದರೆ ಸರಿಯಲ್ಲ. ಈ ದಿನ ನ್ಯಾಯಾಲಯದ ಮುಂದೆ ಹಾಜರಿರುವ ವ್ಯಕ್ತಿಯೇ ಸದರಿ ನಿಪಿ-1ರ ಸಮಯದಲ್ಲಿ ಹಾಜರಿದ್ದ ವ್ಯಕ್ತಿ ಎಂದರೆ ಸರಿಯಲ್ಲ.

ಸದರಿ ವಿಚಾರಗಳನ್ನು ಓದಿ ಹೇಳಿದ ತರುವಾಯ ನಾನು ನಿಪಿ-1 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ

ನನಗೆ ಎಲ್ಲಾ ವಿಚಾರ ಗೊತ್ತಿದ್ದರು ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)** **ಓ.ಹೇ.ಕೇ. ಸರಿ ಇದೆ.**

**02ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**

**ಮತ್ತು ಜೆಎಂಎಫ್ ಸಿ, ಚನ್ನಗಿರಿ.**

02ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ**. 238/2018**

| | |
|---|---|
| ಹೆಸರುಃ ಸಮೀವುಲ್ಲಾ ಷರೀಪ್ | ಚಾಸಾಃ 1 |
| ತಂದೆಯ ಹೆಸರುಃ ಷಫಿ ವುಲ್ಲಾ ಷರೀಪ್ | ಪ್ರಾಸಾ: 3 |
| ವಯಸ್ಸುಃ 38 ವರ್ಷ | |
| ಉದ್ಯೋಗಃ ಚಾಲಕ | |
| ವಾಸ ಸ್ಥಳಃ ನಲ್ಲೂರು ಕ್ಯಾಂಪ್ , ಚನ್ನಗಿರಿ ತಾಃ | |
| ಸಾಕ್ಷಿಗೆ ದಿನಾಂಕಃ 03-07-2023 ರಂದು ಪ್ರಮಾಣ ವಚನ ಬೋಧಿಸಲಾಯಿತು. | |

**<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ</u>**

ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ಸಹಿಯನ್ನು ನಾನು 2017 ರಂದು ನಮ್ಮ ಮನೆಯಲ್ಲಿ ಆದ ಕಳ್ಳತನದ ವಿಚಾರವಾಗಿ ಮಾಡಿರುತ್ತೇನೆ.

2017ನೇ ಇಸ್ವಿಯಲ್ಲಿ ನಮ್ಮ ಮಗುವಿಗೆ ಅನಾರೋಗ್ಯವಿದ್ದ ಕಾರಣ ನಾನು ಶಿವಮೊಗ್ಗ ಆಸ್ಪತ್ರೆಯಲ್ಲಿ ಇದ್ದು ಚಿಕಿತ್ಸೆ ಕೊಡಿಸುತ್ತಿದ್ದು. ನಮ್ಮ ಮನೆಯ ಪಕ್ಕದಲ್ಲಿರುವ ನಮ್ಮ ಅತ್ತೆಯವರು ನನಗೆ ಫೋನ್ ಕರೆ ಮಾಡಿ ಮನೆ ಬಾಗಿಲು ತೆರೆದಿರುವ ವಿಚಾರ ತಿಳಿಸಿರುತ್ತಾರೆ. ನಂತರ ನಾವು ಮಾರನೇ ದಿನ ಬೆಳಿಗ್ಗೆ ನಮ್ಮ ಮನೆಗೆ ಬಂದು ನೋಡಲಾಗಿ ಮನೆಯ ವಸ್ತುಗಳು ಎಲ್ಲಾ ಚೆಲ್ಲಾಪಿಲ್ಲಿಯಾಗಿದ್ದು ಬೀರುವಿನ ಬಾಗಿಲು ತೆಗೆದಿದ್ದು ಅದರಲ್ಲಿನ ಬಟ್ಟೆಗಳು

ಚೆಲ್ಲಾಪಿಲ್ಲಿಯಾಗಿರುತ್ತದೆ. ಬೀರುವಿನಲ್ಲಿದ್ದ 3 ತೊಲ ತೂಕದ ಸರ ಮತ್ತು ಜುಮ್ಕಿ ಮತ್ತು 80 ಸಾವಿರ ನಗದು ಹಣ ಕಳ್ಳತನವಾಗಿರುತ್ತದೆ. ಸದರಿ ವಿಚಾರವಾಗಿ ನಾನು ಪೊಲೀಸ್ ಠಾಣೆಯಲ್ಲಿ ದೂರನ್ನು ನೀಡಿರುತ್ತೇನೆ. ಸದರಿ ದೂರನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸದರಿ ದೂರನ್ನು ನಿಪಿ-2 ಎಂದು ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

ಅದೇ ದಿನ ಪೊಲೀಸರು ನಾನು ತೋರಿಸಿದ ಸ್ಥಳದಲ್ಲಿ ನನ್ನ ಸಮಕ್ಷಮ ಮಹಜರು ಕ್ರಮ ಜರುಗಿಸಿರುತ್ತಾರೆ, ಸದರಿ ಮಹಜರನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-3 ಎಂದು, ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ಪೊಟೋದಲ್ಲಿ ನಾನು ಇದ್ದೆನೆ. ಸದರಿ ಪೊಟೋವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು. ಸದರಿ ನಿಪಿ-4 ನ್ನು ನಿಪಿ-3 ರ ಸಮಯಕ್ಕೆ ತೆಗೆಯಲಾಯಿತು. ನಿಪಿ-4ರಲ್ಲಿ ಚಾಸಾ-2 ಮತ್ತು 3 ರವರು ಇದ್ದಾರೆ.

ನಮ್ಮ ಮನೆಯಲ್ಲಾದ ಕಳ್ಳತನ ಯಾರು ಮಾಡಿದರು ಎಂಬ ಬಗ್ಗೆ ನಾನು ಪೊಲಿಸರಿಂದ ಕೇಳಿ ತಿಳಿದುಕೊಂಡಿಲ್ಲ.

ಪೊಲೀಸರು ಆರೋಪಿತರನ್ನು ನಮ್ಮ ಮನೆ ಬಳಿ ಕರೆದುಕೊಂಡು ಬಂದಾಗ ನಾನು ಶಿವಮೊಗ್ಗದಲ್ಲಿದ್ದೆನು.

( ಮಾನ್ಯ ಸಹಾಯಕ ಸರ್ಕಾರಿ ಅಭಿಯೇಜಕರು ಮುಂದುವರಿದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದು ಸಮಯಾವಕಾಶ ನೀಡಲಾಯಿತು.)

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**02ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**

**ಮತ್ತು ಜೆಎಂಎಫ್ ಸಿ, ಚನ್ನಗಿರಿ.**

02ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ**. 238/2018**

| | |
|---|---|
| ಹೆಸರುಃ ಅಬ್ದುಲ್ ಖದೀರ್ | ಚಾಸಾಃ 4 |
| ತಂದೆಯ ಹೆಸರುಃ ಅಬ್ದುಲ್ ಖುದ್ದು ಸಾಬ್ | ಪ್ರಾಸಾ: 2 |
| ವಯಸ್ಸುಃ 44 ವರ್ಷ | |
| ಉದ್ಯೋಗಃ ಟಿಂಬರ್ ವ್ಯಾಪಾರ | |
| ವಾಸ ಸ್ಥಳಃ ಚನ್ನಗಿರಿ | |
| ಸಾಕ್ಷಿಗೆ ದಿನಾಂಕಃ 19-06-2023 ರಂದು ಪ್ರಮಾಣ ವಚನ ಬೋಧಿಸಲಾಯಿತು. | |

**<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ</u>**

ಈಗ ನೋಡುತ್ತಿರುವ ಇನ್ನೊಂದು ದಾಖಲೆಯಲ್ಲಿರುವ ಸಹಿ ನನ್ನದು. ಸದರಿ ದಾಖಲೆ ಅಮಾನತು ಪಂಚನಾಮೆಯ ದೃಢೀಕೃತ ನಕಲಾಗಿದ್ದು ಅದನ್ನು ನಿಪಿ-1 ಎಂದು. ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಯಾವಾಗ, ಯಾವ ಕಾರಣಕ್ಕಾಗಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ, ನಾನು ಯಾವುದೋ ಕೆಲಸದ ಮೇರೆಗೆ ಪೊಲೀಸ್ ಠಾಣೆಗೆ ಬಂದಿದ್ದಾಗ ಪೊಲೀಸರ ಸೂಚನೆ ಮೇರೆಗೆ ಸದರಿ ದಾಖಲೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಅದರಲ್ಲಿ ಬರೆದ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ನಿಪಿ-1 ಕ್ಕೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಮಹಜರಿಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಮಹಜರನ್ನು ನೋಡಲಾಗಿ ಸಾಕ್ಷಿಯು ಮಹಜರಿಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**<u>ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ</u>**

ದಿಃ28-03-2017ರಂದು ಚಾಸಾ-15 ರವರು ನನ್ನನ್ನು ಹಾಗೂ ಚಾಸಾ-5 ರವರ ಸಮಕ್ಷಮ ನಿಪಿ-1 ರಲ್ಲಿ ನಮೂದಿಸಿರುವ ವಾಹನಗಳನ್ನು ಮತ್ತು ಬಂಗಾರದ ಒಡವೆಗಳನ್ನು ಅಮಾನತು ಪಂಚನಾಮೆ ಜರುಗಿಸಲು ಪಂಚರಾಗಿ ಸಹಕರಿಸಲು ಕೋರಿದರು ಎಂದರೆ ಸರಿಯಲ್ಲ. ಸದರಿ ನಿಪಿ-1 ನ್ನು ಅದೇ ದಿನ ಮದಾಹ್ನ 3.00 ರವರೆಗೆ ಜರುಗಿಸಲಾಯಿತು ಎಂದರೆ ನನಗೆ ಗೊತ್ತಿಲ್ಲ.

ನನಗೆ ಎಲ್ಲಾ ವಿಚಾರ ಗೊತ್ತಿದ್ದರು ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು - ಆರೋಪಿತರ ಪರ ವಕೀಲರಿಂದ – ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**02ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**

**ಮತ್ತು ಜೆಎಂಎಫ್ ಸಿ, ಚನ್ನಗಿರಿ.**